ರಾಜೀವ ಗಾಂಧಿ ವೈದ್ಯಕೀಯ ವಿಶ್ವವಿದ್ಯಾಲಯದಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರದ ಬಗ್ಗೆ

2912 (2744) ಶ್ರೀ ಗುರುಸ್ವಾಮಿ ಎ.ಎಸ್. (ಚಾಮುಂಡೇಶ್ವರಿ) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜೀವ್‌ಗಾಂಧಿ ವೈದ್ಯಕೀಯ ವಿಶ್ವವಿದ್ಯಾಲಯದಲ್ಲಿ ಪ್ರಸ್ತುತ ಮತ್ತು ಹಿಂದಿನ ಉಪಕುಲಪತಿಗಳ ಅವಧಿಯಲ್ಲಿ ಎಷ್ಟು ಸಂದರ್ಭಗಳಲ್ಲಿ ಅಂಕಪಟ್ಟಿಗಳನ್ನು ತಿದ್ದಿರುವುದು ಮತ್ತು ಉತ್ತರ ಪತ್ರಿಕೆಯ ಮೌಲ್ಯಮಾಪನದಲ್ಲಿ ಅಕ್ರಮ ನಡೆದಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಇಂತಹ ಅವ್ಯವಹಾರಗಳ ಪ್ರಕರಣಗಳ ಸಂಖ್ಯೆ ಎಷ್ಟು ಹಾಗೂ ಇಂತಹ ಅವ್ಯವಹಾರಗಳಲ್ಲಿ ಭಾಗಿಯಾದ ಅಧಿಕಾರಿಗಳ ವಿರುದ್ಧ ಮೊಕದ್ದಮೆ ಹೂಡಲಾಗಿದೆಯೇ; ಹಾಗಿದ್ದಲ್ಲಿ, ಆ ಮೊಕದ್ದಮೆಗಳು ಈಗ ಯಾವ ಹಂತದಲ್ಲಿವೇ;

ಇ) ಈ ರೀತಿಯ ಅಕ್ರಮಗಳನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡ ಮುನ್ನೆಚ್ಚರಿಕೆಯ ಕ್ರಮಗಳೇನು?

ಡಾ॥ ಎ.ಬಿ. ಮಾಲಕರೆಡ್ಡಿ (ವೈದ್ಯಕೀಯ ಶಿಕ್ಷಣ ಸಚಿವರು)

ಅ) ಇಂಥ ಅಕ್ರಮಗಳು ನಡೆದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ರಾಜ್ಯದ ಶಿಕ್ಷಕರ ನೇಮಕಾತಿ ಮತ್ತು ವರ್ಗ ವಣೆಗಳಲ್ಲಿ ಕೌನ್ಸಿಲಿಂಗ್ ಪದ್ಧತಿಯ ಸುಧಾರಣೆ ಕುರಿತು

2913 (3258) ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಶಿಕ್ಷಕರ ನೇಮಕಾತಿಯಲ್ಲಿ ಮತ್ತು ವರ್ಗಾವಣೆಗಳಲ್ಲಿ ಕೌನ್ಸಿಲಿಂಗ್ ಪದ್ಧತಿ ಜಾರಿಗೆ ತಂದಿರುವುದರಿಂದ ಶಿಕ್ಷಕರ ಹಳ್ಳಿ ಪ್ರದೇಶದ ಶಾಲೆಗಳನ್ನು ಆಯ್ಕೆ ಮಾಡಿಕೊಳ್ಳದೇ ಹಳ್ಳಿಯ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ರೀತಿ ಕೌನ್ಸಿಲಿಂಗ ಪದ್ಧತಿಯನ್ನು ಸುಧಾರಿಸಿ, ಹಳ್ಳಿ ಶಾಲೆಗಳ ಶಿಕ್ಷಕರ ಕೊರತೆಯನ್ನು ಸರ್ಕಾರ ನಿವಾರಿಸುವುದೇ;

ಇ) ಈಗ ಹಳ್ಳಿಯ ಶಾಲೆಗಳಲ್ಲಿ ತೆರವಾಗಿರುವ ಹುದ್ದೆಗಳನ್ನು ಯಾವ ರೀತಿ ತುಂಬಿಸಲಾಗುವುದು;

ಡಿ) ಮೀಸಲಾತಿ ನಿಯಮ ಪ್ರಕಾರ ಬ್ಯಾಕಲಾಗ್ ಹುದ್ದೆಗಳನ್ನು ತುಂಬದೇ ಹಾಗೆಯೇ ಉಳಿದಿರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುವುದಿಲ್ಲವೇ;

ಉ) ಬ್ಯಾಕಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

ಊ) ಕಿರಿಯ ಮತ್ತು ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ಮತ್ತು ಹಾಜರಾತಿಯನ್ನು ಗಣನೆಗೆ ತೆಗೆದುಕೊಳ್ಳದೆ ಅಂತಹ ಪ್ರಾಥಮಿಕ ಶಾಲೆಗಳಲ್ಲಿ ಕನಿಷ್ಠ ಎಷ್ಟು ಶಿಕ್ಷಕರು ಇರಬೇಕೆಂಬ ನಿಯಮ ಸರ್ಕಾರ ಅಳವಡಿಸಿದೆ?